# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪರಂಪರಾ ಸ್ಥಳಗಳು ಹಾಗೂ ಸ್ಮಾರಕಗಳ ರಕ್ಷಣೆ, ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ರಾಜ್ಯ ಮಟ್ಟದ ಸಮನ್ವಯ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:** ಭಾರತ ಸರ್ಕಾರ, ಸಂಸ್ಕೃತಿ ಮಂತ್ರಾಲಯದ ಕಾರ್ಯದರ್ಶಿಯವರ ಅ.ಸ. ಪತ್ರ ಸಂಖ್ಯೆ: 25/90/2010-11, ಎಂಓಎನ್. ದಿನಾಂಕ 2.5.2011

ಪ್ರಸ್ತಾವನೆ:

ಕರ್ನಾಟಕ ರಾಜ್ಯದಲ್ಲಿನ ಪರಂಪರಾ ಸ್ಥಳಗಳು ಹಾಗೂ ಸ್ಮಾರಕಗಳ ರಕ್ಷಣೆ, ಸಂರಕ್ಷಣೆ ಹಾಗೂ ಅಭಿವೃದ್ಧಿ ಕಾರ್ಯವು ಭಾರತೀಯ ಸರ್ವೇಕ್ಷಣಾ ಇಲಾಖೆ ಮತ್ತು ರಾಜ್ಯ ಸರ್ಕಾರಕ್ಕೆ ಸಬಂಧಪಟ್ಟಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರಾಚೀನ ಸ್ಮಾರಕ ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ ಮತ್ತು ಮಾನ್ಯೀಕರಣ) ಅಧಿನಿಯಮ 2010ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಭಾರತೀಯ ಸರ್ವೇಕ್ಷಣಾ ಇಲಾಖೆ ಮತ್ತು ರಾಜ್ಯ ಸರ್ಕಾರದ ಸಕ್ಷಮಪ್ರಾಧಿಕಾರಗಳಲ್ಲಿ ಸಮನ್ವಯದ ಅವಶ್ಯಕತೆ ಇರುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಪರಂಪರಾ ಸ್ಥಳಗಳು ಹಾಗೂ ಸ್ಮಾರಕಗಳ ರಕ್ಷಣೆ, ಸಂರಕ್ಷಣೆ ಹಾಗೂ ಅಭಿವೃದ್ಧಿಯ ವಿಷಯದ ಬಗ್ಗೆ ಚರ್ಚಿಸಿ ಸೂಕ್ತ ನಿರ್ಣಯ ತೆಗೆದುಕೊಳ್ಳಲು ರಾಜ್ಯ ಮಟ್ಟದ ಸಮನ್ವಯ ಸಮಿತಿಯೊಂದನ್ನು ರಚಿಸುವಂತೆ ಮೇಲೆ ಓದಲಾದ ಅರೆ ಸರ್ಕಾರಿ ಪತ್ರದಲ್ಲಿ ಕಾರ್ಯದರ್ಶಿ, ಭಾರತ ಸರ್ಕಾರ, ಸಂಸ್ಕೃತಿ ಮಂತ್ರಾಲಯ, ನವದೆಹಲಿ ರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದೆ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 120 ಕೆಎಂಯು 2011 ಬೆಂಗಳೂರು, ದಿ:26.12.2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕದ ಪರಂಪರಾ ಸ್ಥಳಗಳು ಹಾಗೂ ಸ್ಮಾರಕಗಳ ರಕ್ಷಣೆ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಚರ್ಚಿಸಿ ಸೂಕ್ತ ನಿರ್ಣಯ ತೆಗೆದುಕೊಳ್ಳುವ ಸಲುವಾಗಿ ಈ ಕೆಳಕಂಡ ಸದಸ್ಯರನ್ನೊಳಗೊಂಡಂತೆ ರಾಜ್ಯ ಮಟ್ಟದ ಸಮನ್ವಯ ಸಮಿತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಚಿಸಲಾಗಿದೆ.

| ಕ್ರಸಂ. | ಹೆಸರು /ವಿಳಾಸ | |
|---|---|---|
| 1 | ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು | ಅಧ್ಯಕ್ಷರು |
| 2 | ಸರ್ಕಾರದ ಕಾರ್ಯದರ್ಶಿಗಳು,<br>ಕನ್ನಡಮತ್ತು ಸಂಸ್ಕೃತಿ ಹಾಗೂ ವಾರ್ತಾ ಇಲಾಖೆ | ಸದಸ್ಯರು |
| 3 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಅಥವಾ ಅವರ ಪ್ರತಿನಿಧಿ (ಜಂಟಿ ಕಾರ್ಯದರ್ಶಿ ದರ್ಜೆಗಿಂತ ಕಡಿಮೆ ಇಲ್ಲದ) | ಸದಸ್ಯರು |
| 4 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ಅಥವಾ ಅವರ ಪ್ರತಿನಿದಿ (ಜಂಟಿ ಕಾರ್ಯದರ್ಶಿ ದರ್ಜೆಗಿಂತ ಕಡಿಮೆ ಇಲ್ಲದ) | ಸದಸ್ಯರು |

| | | |
|---|---|---|
| 5 | ಆಯುಕ್ತರು,<br>ಪ್ರಾಚ್ಯವಸ್ತು,ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು | ಸದಸ್ಯರು |
| 6 | ನಿರ್ದೇಶಕರು (ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. | ಸದಸ್ಯರು |
| 7 | ಮುಖ್ಯ ಕಾರ್ಯನಿರ್ವಹಣಾಧಿಕಾರಿ, ವಕ್ಫ್ ಮಂಡಳಿ ಬೆಂಗಳೂರು | ಸದಸ್ಯರು |
| 8 | ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ | ಸದಸ್ಯರು |
| 9 | ಪೋಲೀಸ್ ಮಹಾ ನಿರ್ದೇಶಕರು, ಬೆಂಗಳೂರು | ಸದಸ್ಯರು |
| 10 | ಪ್ರಾದೇಶಿಕ ನಿರ್ದೇಶಕರು, ಭಾರತೀಯ ಸರ್ವೇಕ್ಷಣಾಲಯ ಇಲಾಖೆ | ಸದಸ್ಯರು |
| 11 | ಪುರಾತತ್ವ ಅಧೀಕ್ಷಕರು, ಭಾರತೀಯ ಸರ್ವೇಕ್ಷಣಾ ಇಲಾಖೆ, ಬೆಂಗಳೂರು ವಲಯ / ಧಾರವಾಡ ವಲಯ | ಸದಸ್ಯ ಕಾರ್ಯದರ್ಶಿ |

ಮೇಲ್ಕಂಡ ಸಮಿತಿಯು ಕನಿಷ್ಠ ಮೂರು ತಿಂಗಳಿಗೊಮ್ಮೆ ಸಭೆ ಸೇರಿ ಈ ಕೆಳಕಂಡ ಅಂಶಗಳ ಬಗ್ಗೆ ಸೂಕ್ತ ನಿರ್ಣಯ ತೆಗೆದುಕೊಳ್ಳುವುದು.

1. ಕರ್ನಾಟಕ ರಾಜ್ಯದಲ್ಲಿನ ಪರಂಪರಾ ಸ್ಥಳಗಳು ಹಾಗೂ ಸ್ಮಾರಕಗಳ ರಕ್ಷಣೆ, ಸಂರಕ್ಷಣೆ ಹಾಗೂ ಇಂತಹ ಸ್ಥಳಗಳಲ್ಲಿ ನೈಸರ್ಗಿಕ ಅಭಿವೃದ್ಧಿ ಕಾರ್ಯಗಳ ಬಗ್ಗೆ .

2. ಪ್ರಾಚೀನ ಸ್ಮಾರಕ ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ ಮತ್ತು ಮಾನ್ಯೀಕರಣ) ಅಧಿನಿಯಮ 2010 ರಡಿಯಲ್ಲಿನ ನಿಯಮಗಳನ್ನು ಉಲ್ಲಂಘಿಸಿ, ಅನಧಿಕೃತ ಒತ್ತುವರಿ ಮತ್ತು ಅನಧಿಕೃತ ನಿರ್ಮಾಣ ಕಾರ್ಯ ನಡೆಯದಂತೆ ನಿರ್ಬಂಧಿಸುವುದು/ತಡೆಗಟ್ಟುವುದು. ಸದರಿ ಅಧಿನಿಯಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಭಾರತೀಯ ಸರ್ವೇಕ್ಷಣಾ ಇಲಾಖೆ ಮತ್ತು ರಾಜ್ಯ ಸರ್ಕಾರದ ಸಕ್ಷಮಪ್ರಾಧಿಕಾರಗಳಲ್ಲಿ ಸಮನ್ವಯ ಸಾಧಿಸುವುದು. ಹೊಸ ಅನ್ವೇಷನೆಯ ಸ್ಥಳಗಳನ್ನು ಸ್ವಾಧಿನಪಡಿಸಿಕೊಳ್ಳುವ ಪ್ರಕರಣಗಳ ಬಗ್ಗೆ

3. ಉತ್ಖನನ ಮತ್ತು ಅನ್ವೇಷಣೆ ಕುರಿತಂತೆ ಭಾರತೀಯ ಸರ್ವೇಕ್ಷಣಾ ಇಲಾಖೆ ಮತ್ತು ರಾಜ್ಯ ಸರ್ಕಾರದ ಸಕ್ಷಮಪ್ರಾಧಿಕಾರಗಳಲ್ಲಿ ಸಮನ್ವಯತೆ ಬಗ್ಗೆ .

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಬಿ. ಹೇಮಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ.
(ಆಡಳಿತ ಕನ್ನಡ)

ಇವರಿಗೆ:-

ಸಂಕಲನಾಧಿಕಾರಿ, ಕರ್ನಾಟಕ ರಾಜ್ಯ ಪತ್ರ ಕೆಂಗೇರಿ, ಹೊರವಲಯ, ಬೆಂಗಳೂರು.
ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಸರಬರಾಜು ಮಾಡುವಂತೆ ಕೋರಿದೆ.

ಪ್ರತಿಯನ್ನು:

1. ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು.
2. ಕಾರ್ಯದರ್ಶಿ, ಭಾರತ ಸರ್ಕಾರ, ಸಂಸ್ಕೃತಿ ಮಂತ್ರಾಲಯ, ನವದೆಹಲಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯ ಇಲಾಖೆ, ವಿಕಾಸ ಸೌಧ, ಬೆಂಗಳೂರು
5. ಆಯುಕ್ತರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆ, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣ, ದೊಡ್ಡಕೆರೆ ಮೈದಾನ, ಮೈಸೂರು-10
6. ಪ್ರಾದೇಶಿಕ ನಿರ್ದೇಶಕರು, ಭಾರತೀಯ ಸರ್ವೇಕ್ಷಣಾಲಯ, ರಾಜಾಜಿನಗರ, ಬೆಂಗಳೂರು.
7. ಸಮಿತಿಯ ಎಲ್ಲಾ ಸದಸ್ಯರುಗಳಿಗೆ
8. ಪುರಾತತ್ವ ಅಧೀಕ್ಷಕರು, ಭಾರತೀಯ ಸರ್ವೇಕ್ಷಣಾ ಇಲಾಖೆ, ಬೆಂಗಳೂರು ವಲಯ / ಧಾರವಾಡ ವಲಯ
9. ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆರವರ ಆಪ್ತ ಕಾರ್ಯದರ್ಶಿ.ವಿಕಾಸ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆರವರ ಆಪ್ತ ಶಾಖೆ, ವಿಕಾಸ ಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.